# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 775 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು (ಕೆ-ಸೆಟ್) ನಡೆಸದೇ ಇರಲು ಕಾರಣವೇನು: | ಸರ್ಕಾರದ ಆದೇಶ ಸಂಖ್ಯೆ:ಇಡಿ 57 ಟಿಇಸಿ 2025, ದಿನಾಂಕ:19.05.2025ರಂತೆ 2025ನೇ ಸಾಲಿನಿಂದ ಮುಂದಿನ ಆದೇಶದವರೆಗೆ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು (K-SET) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಮೂಲಕ ನಡೆಸಲು ಅನುಮತಿ ನೀಡಿ ಆದೇಶಿಸಿದೆ.<br><br>ಅದರನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕೆ-ಸೆಟ್ 2025 ಪರೀಕ್ಷೆ ನಡೆಸಲು ಸಿದ್ಧತೆ ನಡೆಸಿದೆ. |
| ಆ) | ತಾತ್ಕಾಲಿಕ ವೇಳಾಪಟ್ಟಿ ಪ್ರಕಟಗೊಂಡರೂ ನಿಗದಿಯಂತೆ ಪರೀಕ್ಷೆ ನಡೆಯದೇ ಸಾವಿರಾರು ಅಭ್ಯರ್ಥಿಗಳು ಆತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಳ್ಳುವ ಕ್ರಮಗಳೇನು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಯಾವುದೇ ತಾತ್ಕಾಲಿಕ ವೇಳಾಪಟ್ಟಿ ಪ್ರಕಟಿಸಿರುವುದಿಲ್ಲ. |
| ಇ) | ಕೇಂದ್ರ ಸರ್ಕಾರವು ವರ್ಷದಲ್ಲಿ ಎರಡು ಬಾರಿ ಅರ್ಹತಾ ಪರೀಕ್ಷೆಯನ್ನು ನಡೆಸುತ್ತಿದ್ದು, ಆದರೆ, ರಾಜ್ಯ ಸರ್ಕಾರವು ಸಾವಿರಾರು ಅಭ್ಯರ್ಥಿಗಳ ಹಿತದೃಷ್ಟಿಯಿಂದ ವರ್ಷದಲ್ಲಿ ಎರಡು ಬಾರಿ ಕೆ-ಸೆಟ್ ಪರೀಕ್ಷೆಯನ್ನು ನಡೆಸುತ್ತಿರುವ ಬಗ್ಗೆ ಸ್ಪಷ್ಟನೆ ಏನು? | ಯುಜಿಸಿ ಅರ್ಹತಾ ಪರೀಕ್ಷೆಯನ್ನು (UGC NET) ವರ್ಷದಲ್ಲಿ ಎರಡು ಬಾರಿ ನಡೆಸಲಾಗುತ್ತಿದ್ದು, ಕರ್ನಾಟಕ ರಾಜ್ಯದ ಎಲ್ಲಾ ಅಭ್ಯರ್ಥಿಗಳು ಸದರಿ 02 ಪರೀಕ್ಷೆಗಳಿಗೆ ಸಹ ಹಾಜರಾಗಲು ಅರ್ಹರಾಗಿದ್ದಾರೆ.<br><br>ಇದರೊಂದಿಗೆ ಕೆ-ಸೆಟ್ ಪರೀಕ್ಷೆಯನ್ನು ವರ್ಷಕ್ಕೆ ಒಂದು ಬಾರಿ ನಡೆಸಲಾಗುತ್ತಿದೆ. ಅಭ್ಯರ್ಥಿಗಳಿಗೆ ಒಟ್ಟು ವರ್ಷಕ್ಕೆ 03 ಅವಕಾಶಗಳು ದೊರೆತಂತಾಗುತ್ತದೆ. |
| ಈ) | 2025ನೇ ಸಾಲಿನ ಕೆ-ಸೆಟ್ ಪರೀಕ್ಷೆಯನ್ನು ಯಾವ ಕಾಲಮಿತಿಯಲ್ಲಿ ನಡೆಸಲಾಗುವುದು? (ಮಾಹಿತಿ ನೀಡುವುದು) | 2025ನೇ ಸಾಲಿನ ಕೆ-ಸೆಟ್ ಪರೀಕ್ಷೆಯನ್ನು ಡಿಸೆಂಬರ್ 2025ರ ಅಂತ್ಯದೊಳಗೆ ನಡೆಸಲು ಉದ್ದೇಶಿಸಲಾಗಿದೆ. |

ಸಂಖ್ಯೆ:ಇಡಿ 281 ಟಿಇಸಿ 2025

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು